1815(2403) ಶ್ರೀ ಹಾಲಪ್ಪ ಹೆಚ್.(ಹೊಸನಗರ): ಮಾನ್ಯ ಪಶುಸಂಗೋಪನೆ ಮತ್ತು ವಕ್ಫ್ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಶಿವಮೊಗ್ಗ ಜಿಲ್ಲೆಯಲ್ಲಿರುವ ಪಶು ಚಿಕಿತ್ಸಾಲಯಗಳ ಸಂಖ್ಯೆ ಎಷ್ಟು; (ತಾಲ್ಲೂಕುವಾರು ವಿವರ ನೀಡುವುದು)

ಆ) ಇವುಗಳಲ್ಲಿ ಮೇಲ್ದರ್ಜೆಗೇರಿಸಲು ಸರ್ಕಾರ ಯಾವ ಕ್ರಮ ಕೈಗೊಂಡಿದೆ.

ಇ) ಯಾವ ಸ್ಥಳದ ಚಿಕಿತ್ಸಾಲಯಗಳನ್ನು ಮೇಲ್ದರ್ಜೆಗೇರಿಸಲಾಗುವುದು.

ಈ) ಹೊಸದಾಗಿ ಪ್ರಾರಂಭಿಸಲು ಉದ್ದೇಶಿಸಿರುವ ಸ್ಥಳಗಳಾವುವು?

ಉ) ಇದರಲ್ಲಿ ಹೊಸನಗರ ಮತ್ತು ಶಿವಮೊಗ್ಗ ತಾಲ್ಲೂಕಿನ ಯಾವ ಸ್ಥಳದಲ್ಲಿ ಪ್ರಾರಂಭಿಸಲು ಉದ್ದೇಶಿಸಲಾಗಿದೆ.

ಊ) ಸದರಿ ಆಸ್ಪತ್ರೆಗಳಲ್ಲಿ ಅಗತ್ಯಕ್ಕೆ ಅನುಗುಣವಾಗಿ ವೈದ್ಯರ, ಸಿಬ್ಬಂದಿಗಳ ಕೊರತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಋ) ಖಾಲಿ ಇರುವ ಹುದ್ದೆಗಳ ಸಂಖ್ಯೆ ಎಷ್ಟು (ತಾಲ್ಲೂಕುವಾರು ವಿವರ ನೀಡುವುದು);

ಋೂ) ಸದರಿ ಹುದ್ದೆಗಳು ನೇಮಕಕ್ಕೆ ಸರ್ಕಾರ ಯಾವ ಕ್ರಮ ಕೈಗೊಳ್ಳುವುದು;

ಎ) ಯಾವಾಗ ನೇಮಕ ಮಾಡಲಾಗುವುದು?

ಶ್ರೀ ಮಿರಾಜುದ್ದೀನ್. ಎನ್.ಪಟೇಲ್ (ಪಶುಸಂಗೋಪನೆ ಮತ್ತು ವಕ್ಫ್ ಸಚಿವರು):

ಅ) ಜಿಲ್ಲೆಯಲ್ಲಿ 50 ಪಶು ಚಿಕಿತ್ಸಾಲಯಗಳು ಕಾರ್ಯನಿರ್ವಹಿಸುತ್ತಿವೆ.

ತಾಲ್ಲೂಕುವಾರು ವಿವರ ಈ ಕೆಳಕಂಡಂತಿದೆ.

ಶಿವಮೊಗ್ಗ	9
ಭದ್ರಾವತಿ	9
ಸಾಗರ	7
ಸೊರಬ	6
ಶಿಕಾರಿಪುರ	4
ಹೊಸನಗರ	4
ತೀರ್ಥಹಳ್ಳಿ	11
ಒಟ್ಟು	50

ಆ), ಇ) ಮತ್ತು ಈ) ಹಾಲಿ ಕಾರ್ಯನಿರ್ವಹಿಸುತ್ತಿರುವ ಪ್ರಾಥಮಿಕ ಪಶುಚಿಕಿತ್ಸಾ ಕೇಂದ್ರಗಳನ್ನು ಪಶುಚಿಕಿತ್ಸಾಲಯಗಳನ್ನಾಗಿ ಹಂತಹಂತವಾಗಿ ಮೇಲ್ದರ್ಜೆಗೇರಿಸುವ ಕಾರ್ಯಕ್ರಮ ಇರುತ್ತದೆ ಹಾಗೂ ರಾಜ್ಯದಲ್ಲಿ ಹಾಲಿ ಇರುವ ಪಶುವೈದ್ಯಕೀಯ ಸಂಸ್ಥೆಗಳ ಸಂಖ್ಯೆ ಸಾಕಷ್ಟು ಇದ್ದು ಹೊಸ ಪಶುವೈದ್ಯಕೀಯ ಸಂಸ್ಥೆಗಳನ್ನು ತೆರೆಯಲು ಪ್ರಸ್ತುತ ಅವಶ್ಯಕತೆ ಕಂಡುಬರುವುದಿಲ್ಲ. ಆದಾಗ್ಯೂ ಡಾ:ನಂಜುಂಡಪ್ಪ ಸಮಿತಿಯ ವರದಿಯಲ್ಲಿನ ಶಿಫಾರಸ್ಸಿನಂತೆ ಎಲ್ಲಿ ಪಶುವೈದ್ಯಕೀಯ ಸಂಸ್ಥೆಗಳು ಜಾನುವಾರು ಸಂಖ್ಯೆಗೆ ಅನುಸಾರವಾಗಿ ಕಡಿಮೆ ಇರುವುದೋ ಅಂತಹ ಅತ್ಯಂತ ಹಿಂದುಳಿದ ತಾಲ್ಲೂಕುಗಳಲ್ಲಿ ಹೊಸ ಸಂಸ್ಥೆಗಳನ್ನು ತೆರೆಯಲು ಕ್ರಮ ಕೈಗೊಳ್ಳಲಾಗುವುದು.

ಊ) –ಮೇಲಿನಂತೆ–

ಋ) ಬಂದಿದೆ.

ೠ) ಒಟ್ಟು 172 ವಿವಿಧ ಹುದ್ದೆಗಳು ಖಾಲಿ ಇವೆ. (ವಿವರ ಅನುಬಂಧದಲ್ಲಿ ನೀಡಲಾಗಿದೆ)

ಌ) ರಾಜ್ಯದಲ್ಲಿ ಸಹಾಯಕ ನಿರ್ದೇಶಕರ ಖಾಲಿ ಹುದ್ದೆಯನ್ನು ಪಶುವೈದ್ಯಾಧಿಕಾರಿಗಳ ವೃಂದದಿಂದ ಮುಂಬಡ್ತಿ ಮೂಲಕ ತುಂಬುವ ಪ್ರಕ್ರಿಯೆ ಪ್ರಾರಂಭಗೊಂಡಿದೆ. ಆ ಪಶುವೈದ್ಯಾಧಿಕಾರಿಗಳ ಹುದ್ದೆ ತುಂಬಲು 250 ಪಶುವೈದ್ಯರನ್ನು ವಿಶೇಷ ನೇರ ನೇಮಕಾತಿ ಅಡಿಯಲ್ಲಿ ನೇಮಕ ಮಾಡಿಕೊಳ್ಳುವ ಪ್ರಕ್ರಿಯೆ ಅಂತಿಮ ಹಂತದಲ್ಲಿದೆ. ಪಶುವೈದ್ಯಕೀಯ ಮೇಲ್ವಿಚಾರಕರು ಹಾಗೂ ಹಿರಿಯ ಪಶುವೈದ್ಯ ಪರೀಕ್ಷಕರ ಖಾಲಿ ಹುದ್ದೆಗಳನ್ನು ಮುಂಬಡ್ತಿ ಮೂಲಕ ಭರ್ತಿ ಮಾಡಲು ಪರಿಶೀಲಿಸಲಾಗುತ್ತಿದೆ. ಪಶುವೈದ್ಯ ಪರೀಕ್ಷಕರ ಹುದ್ದೆಗಳನ್ನು 50 : 50 ರ ಅನುಪಾತದಲ್ಲಿ ಪಶುವೈದ್ಯ ಸಹಾಯಕ ಮುಂಬಡ್ತಿ ಹಾಗೂ ನೇರ ನೇಮಕಾತಿ ಮೂಲಕ ಭರ್ತಿ ಮಾಡುವ ಪ್ರಸ್ತಾವನೆ ಪರಿಶೀಲನೆಯಲ್ಲಿದೆ. ಇಲಾಖೆಯಲ್ಲಿ ಎಸ್.ಎಸ್.ಎಲ್.ಸಿ. ಪಾಸಾದ ಗ್ರೂಪ್ ಡಿ ವೃಂದದ ನೌಕರರಿಗೆ ಪಶುವೈದ್ಯ ಸಹಾಯಕರ ಹುದ್ದೆಗೆ ಮುಂಬಡ್ತಿ ಕೊಡುವ ಪ್ರಸ್ತಾವನೆ ಪರಿಶೀಲನೆಯಲ್ಲಿದೆ. ವಾಹನ ಚಾಲಕರ ಖಾಲಿ ಹುದ್ದೆಗಳನ್ನು ಭಾರಿ ವಾಹನ ಚಾಲನೆ ಪರವಾನಗಿ ಪಡೆದ ಡಿ ದರ್ಜೆಯ ನೌಕರರಿಗೆ ಮುಂಬಡ್ತಿ ನೀಡಿ ತುಂಬಲು ಪರಿಶೀಲಿಸಲಾಗುತ್ತಿದೆ. ಡಿ ದರ್ಜೆ ಖಾಲಿ ಹುದ್ದೆಗಳನ್ನು ಅನುಕಂಪದ ಆಧಾರದ ಮೇರೆಗೆ ಹಾಗೂ ಇತರೆ ಇಲಾಖೆಗಳಿಂದ ಮರು ವಿನ್ಯಾಸ ಮೂಲಕ ಭರ್ತಿ ಮಾಡಲಾಗುತ್ತಿದೆ.

ಎ) –ಮೇಲಿನಂತೆ–

ಅನುಬಂಧ-1

ಶಿವಮೊಗ್ಗ ಜಿಲ್ಲೆಯ ಸಿಬ್ಬಂದಿ ವಿವರ

ಪ್ರಶ್ನೆ ಸಂಖ್ಯೆ:2403

ತಾಲ್ಲೂಕು	ಸಹಾಯಕ ನಿರ್ದೇಶಕರು/ಪಶುವೈದ್ಯಾಧಿಕಾರಿ			ಇತರೆ ಸಿಬ್ಬಂದಿ (*)		
	ಮಂಜೂರು	ಭರ್ತಿ	ಖಾಲಿ	ಮಂಜೂರು	ಭರ್ತಿ	ಖಾಲಿ
ಶಿವಮೊಗ್ಗ	13	12	1	87	78	9
ಭದ್ರಾವತಿ	12	6	6	69	60	9
ತೀರ್ಥಹಳ್ಳಿ	14	6	8	80	47	33
ಶಿಕಾರಿಪುರ	8	8	0	73	52	21
ಹೊಸನಗರ	6	4	2	56	34	22
ಸಾಗರ	12	9	3	67	38	29
ಸೊರಬ	10	6	4	68	43	25
ಒಟ್ಟು	75	51	24	500	352	148

(*)

ತಾಲ್ಲೂಕು	ಪಶುವೈದ್ಯಕೀಯ ಮೇಲ್ವಿಚಾರಕರು	ಪಶು ವೈದ್ಯಕೀಯ ಪರೀಕ್ಷಕರು	ಹಿರಿಯ ಪಶುವೈದ್ಯಕೀಯ ಪರೀಕ್ಷಕರು	ಪಶುವೈದ್ಯಕೀಯ ಸಹಾಯಕರು	ವಾಹನ ಚಾಲಕರು	ಡಿ ಗ್ರೂಪ್
ಶಿವಮೊಗ್ಗ	2	1	4	0	0	2
ಭದ್ರಾವತಿ	0	0	2	0	0	7
ತೀರ್ಥಹಳ್ಳಿ	1	0	8	9	0	15
ಶಿಕಾರಿಪುರ	1	1	4	9	0	6
ಹೊಸನಗರ	0	2	2	7	0	11
ಸಾಗರ	2	0	5	8	0	12
ಸೊರಬ	2	10	2	9	0	4
ಒಟ್ಟು	8	14	27	42	0	57

1816(2405) ಶ್ರೀ ಹಾಲಪ್ಪ ಹೆಚ್.(ಹೊಸನಗರ): ಮಾನ್ಯ ಸಮಾಜ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಗಂಗಾ ಕಲ್ಯಾಣ ಯೋಜನೆಯಡಿಯಲ್ಲಿ ವಿವಿಧ ಇಲಾಖೆಯಿಂದ (ಬಿ.ಸಿ.ಎಂ. ಮತ್ತು ಪರಿಶಿಷ್ಟ ಜಾತಿ, ಪರಿಶಿಷ್ಟ ವರ್ಗ ನಿಗಮ) ಕೊರೆದ ಬಾವಿಗಳ ಸಂಖ್ಯೆ ಎಷ್ಟು;

ಆ) ಕೊರೆದ ಬಾವಿಗಳಿಗೆ ವಿದ್ಯುತ್ ಸಂಪರ್ಕ ಕಲ್ಪಿಸದೆ ಇರುವುದು ಗಮನಕ್ಕೆ ಬಂದಿದೆಯೇ;

ಇ) ಬಂದಿದ್ದಲ್ಲಿ, ಅವುಗಳ ಸಂಖ್ಯೆ ಎಷ್ಟು;

ಈ) ವಿದ್ಯುತ್ ಸಂಪರ್ಕ ಕಲ್ಪಿಸದೆ ಇರುವುದರಿಂದ ಸಾರ್ವಜನಿಕರಿಗೆ (ಫಲಾನುಭವಿಗಳಿಗೆ) ಹಾಗೂ ಸರ್ಕಾರಕ್ಕೆ ನಷ್ಟವಾಗಿರುವುದು ಗಮನಕ್ಕೆ ಬಂದಿದೆಯೇ;

ಡಾ: ವೈ.ನಾಗಪ್ಪ (ಸಮಾಜ ಕಲ್ಯಾಣ ಸಚಿವರು):

ಅ) ಗಂಗಾ ಕಲ್ಯಾಣ ಯೋಜನೆಯಡಿಯಲ್ಲಿ ಗಂಗಾ ಕಲ್ಯಾಣ ಸಾಮೂಹಿಕ ಮತ್ತು ವೈಯಕ್ತಿಕ ಕೊಳವೆಬಾವಿ ಯೋಜನೆಯಡಿ ಕರ್ನಾಟಕ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಗಳ ಅಭಿವೃದ್ಧಿ ನಿಗಮದಿಂದ ಒಟ್ಟು 31.233 ಕೊಳವೆಬಾವಿಗಳನ್ನು, ಕರ್ನಾಟಕ ಹಿಂದುಳಿದ ವರ್ಗಗಳ ಅಭಿವೃದ್ಧಿ ನಿಗಮದಿಂದ ಒಟ್ಟು 2676 ಕೊಳವೆಬಾವಿಗಳನ್ನು ಹಾಗೂ ಕರ್ನಾಟಕ ಅಲ್ಪಸಂಖ್ಯಾತರ ಅಭಿವೃದ್ಧಿ ನಿಗಮದಿಂದ ಒಟ್ಟು 2180 ಕೊಳವೆಬಾವಿಗಳನ್ನು ಕೊರೆಯಲಾಗಿದೆ.

ಆ) ಹೌದು.

ಇ) ಕರ್ನಾಟಕ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ವರ್ಗಗಳ ಅಭಿವೃದ್ಧಿ ನಿಗಮದಿಂದ ಒಟ್ಟು 6413 ಕೊಳವೆಬಾವಿಗಳಿಗೆ; ಕರ್ನಾಟಕ ಹಿಂದುಳಿದ ವರ್ಗಗಳ ಅಭಿವೃದ್ಧಿ ನಿಗಮದಿಂದ ಒಟ್ಟು 1379 ಕೊಳವೆಬಾವಿಗಳಿಗೆ ಹಾಗೂ ಕರ್ನಾಟಕ ಅಲ್ಪಸಂಖ್ಯಾತರ ಅಭಿವೃದ್ಧಿ ನಿಗಮದಿಂದ ಒಟ್ಟು 829 ಕೊಳವೆಬಾವಿಗಳಿಗೆ ವಿದ್ಯುದ್ದೀಕರಣಗೊಳಿಸಲು ಬಾಕಿ ಇವೆ.